ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೩೩**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೇ ಅಧಿವೇಶನ

**(ಮುಂದುವರೆದ ಉಪವೇಶನಗಳು)**

**ಶುಕ್ರವಾರ, ದಿನಾಂಕ: ೨೪ನೇ ನವೆಂಬರ್, ೨೦೧೭**

---

**ಸಮೂಹ – V**

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು.

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

೩. ಉನ್ನತ ಶಿಕ್ಷಣ ಸಚಿವರು.

೪. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು.

೫. ಸಾರಿಗೆ ಸಚಿವರು.

೬. ಗಣಿ ಮತ್ತು ಭೂವಿಜ್ಞಾನ ಸಚಿವರು.

೭. ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು.

---

**ಗಣಿಗಾರಿಕೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ**

**ಶ್ರೀ ಘೋಟ್ನೇಕರ್ ಶ್ರೀಕಾಂತ್ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೪೧ (೪೪೬೭) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾರವಾರ ಜಿಲ್ಲೆಯ, ಗೋಕರ್ಣ ಗ್ರಾಮ ಪಂಚಾಯತಿ ವ್ಯಾಪ್ತಿಯ ಹನೇಹಳ್ಳಿಯಲ್ಲಿ ನಡೆಯುತ್ತಿರುವ ಶಿಲೆಕಲ್ಲು ಗಣಿಗಾರಿಕೆಯಿಂದ ಸಾರ್ವಜನಿಕರಿಗೆ ತೊಂದರೆಯಾಗಿ ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಸದರಿ ಸ್ಥಳದಲ್ಲಿ ಗಣಿಗಾರಿಕೆಗೆ ಬಳಸಲಾಗುತ್ತಿರುವ ಭಾರಿ ಸ್ಫೋಟಕಗಳಿಂದ ಗ್ರಾಮದ ವಯೋವೃದ್ಧರು ಊರು ಬಿಡುತ್ತಿದ್ದರೂ ಇದಕ್ಕೆ ಸಂಬಂಧಿಸಿದ ಅಧಿಕಾರಿ ಯಾವುದೇ ಕ್ರಮಕೈಗೊಳ್ಳದೆ ಇರುವುದರಿಂದ ಇಂತಹ ಅಧಿಕಾರಿ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದು ಯಾವಾಗ ; (ವಿವರ ನೀಡುವುದು)

(ಇ) ಸದರಿ ಗಣಿಗಾರಿಕೆ ನಡೆಸುತ್ತಿರುವವರು ಯಾರು ; ಈ ಗಣಿಗಾರಿಕೆಗೆ ಅನುಮತಿ ನೀಡಲು ಇರುವ ಮಾನದಂಡವೇನು ; ಸಾರ್ವಜನಿಕರಿಗೆ ತೊಂದರೆಯಾಗುವ ಸ್ಥಳದಲ್ಲಿ ಗಣಿಗಾರಿಕೆ ಮಾಡಬಹುದೇ ; ಇದಕ್ಕೆ ಅನುಮತಿಸಿದವರು ಯಾರು ; (ವರದಿ ನೀಡುವುದು)

(ಈ) ಸಾರ್ವಜನಿಕರಿಗೆ ಈ ರೀತಿ ತೊಂದರೆಯಾಗುತ್ತಿರುವ ಗಣಿಗಾರಿಕೆ ಕುರಿತು ಇಲ್ಲಿಯವರೆಗೆ ಸಂಬಂಧಿಸಿದ ಅಧಿಕಾರಿ ಸ್ಥಳ ಪರಿಶೀಲನೆ ಮಾಡಿ ಕ್ರಮಕೈಗೊಳ್ಳದೇ ಇರಲು ಕಾರಣವೇನು ? (ವಿವರ ನೀಡುವುದು)

## ೧೫ನೇ ಹಣಕಾಸಿನ ಕ್ರಿಯಾ ಯೋಜನೆಯನ್ನು ಜಿಲ್ಲಾ ಪಂಚಾಯತಿ ಮೂಲಕ ಅನುಮೋದನೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೮೨ (೩೯೦೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೧೫ನೇ ಹಣಕಾಸಿನ ಕ್ರಿಯಾ ಯೋಜನೆಯನ್ನು ಜಿಲ್ಲಾ ಪಂಚಾಯತಿ ಮೂಲಕ ಅನುಮೋದನೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಹಿಂದೆ ಗ್ರಾಮ ಪಂಚಾಯತಿಗಳು ಮಾಡಿದ ಕ್ರಿಯಾ ಯೋಜನೆಯನ್ನು ತಾಲ್ಲೂಕು ಪಂಚಾಯತಿ ಅನುಮೋದನೆ ನೀಡುತ್ತಿದ್ದದ್ದು ಸರ್ಕಾರದ ಗಮನದಲ್ಲಿದೆಯೇ;

(ಇ) ಈ ವ್ಯವಸ್ಥೆಯನ್ನು ಸರಿಪಡಿಸಿ ತಾಲ್ಲೂಕು ಪಂಚಾಯತಿ ಮಟ್ಟದಲ್ಲಿ ಅನುಮೋದನೆ ನೀಡುವ ಕುರಿತು ಸರ್ಕಾರ ಗಮನ ಹರಿಸುವುದೇ ?

## ಗದಗದಲ್ಲಿ ಪ್ರಾರಂಭವಾಗಿರುವ ಗ್ರಾಮೀಣ ವಿಶ್ವವಿದ್ಯಾಲಯದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೪೮೩ (೪೮೭೬) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರದಿಂದ ಗದಗದಲ್ಲಿ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ ಯಾವಾಗ ಪ್ರಾರಂಭವಾಯಿತು ;

(ಆ) ಈ ವಿಶ್ವವಿದ್ಯಾಲಯಕ್ಕೆ ಇಲ್ಲಿಯವರೆಗೆ ಸೃಷ್ಟಿಸಿದ ಹುದ್ದೆಗಳೆಷ್ಟು ; ಅದರಲ್ಲಿ ಖಾಯಂ/ಗುತ್ತಿಗೆ/ಹೊರಗುತ್ತಿಗೆ ಮೇಲೆ ಎಷ್ಟು ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗಿದೆ ; ವೃಂದವಾರು, ಪ್ರವರ್ಗವಾರು ವಿವರ ನೀಡುವುದು; ಹಾಗೂ ಈ ಹುದ್ದೆಗಳನ್ನು ನೇಮಕ ಮಾಡಿಕೊಳ್ಳುವಾಗ ಪಾಲಿಸಿರುವ ನಿಯಮಗಳೇನು ;

(ಇ) ಸದರಿ ವಿಶ್ವವಿದ್ಯಾಲಯದಿಂದ ಇಲ್ಲಿಯವರೆಗೆ ಯಾವ ಯೋಜನೆಗಳನ್ನು ಮತ್ತು ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ಮತ್ತು ಅದರಲ್ಲಿ ಕಾರ್ಯಗತಗೊಳಿಸಿದ ಯೋಜನೆಗಳೆಷ್ಟು ;

(ಈ) ಸದರಿ ವಿಶ್ವವಿದ್ಯಾಲಯದಿಂದ ಯಾವ ಯಾವ ಕೋರ್ಸ್‌ಗಳನ್ನು ಮತ್ತು ಯಾವಾಗ ಪ್ರಾರಂಭಿಸಲಾಗಿದೆ ; ವಿವರಣೆ ನೀಡುವುದು ; ಈ ಕೋರ್ಸ್‌ಗಳ ವಿಶೇಷತೆ ಏನು ; ಈ ಕೋರ್ಸ್‌ಗಳಿಂದ ಸ್ವಯಂ ಉದ್ಯೋಗ/ನೌಕರಿ/ಗ್ರಾಮೀಣ ಅಭಿವೃದ್ಧಿಗೆ ಸಹಾಯಕಾರಿ ಆಗಲಿದೆಯೇ ; (ವಿವರಣೆ ನೀಡುವುದು)

(ಉ) ಸದರಿ ವಿಶ್ವವಿದ್ಯಾಲಯದಿಂದ ಕೋರ್ಸ್‌ಗಳನ್ನು ಮತ್ತು ಕಾರ್ಯಕ್ರಮಗಳನ್ನು ಪ್ರಾರಂಭಿಸುವಾಗ ಸಂಬಂಧಪಟ್ಟ ವಿಷಯ ತಜ್ಞರಿಂದ ಹಾಗೂ ಸಂಬಂಧಪಟ್ಟವರಿಂದ ಅಭಿಪ್ರಾಯ ಪಡೆಯಲಾಗಿದೆಯೇ ; (ವಿವರಣೆ ನೀಡುವುದು)

(ಊ) ೨೦೧೭–೧೮ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಸದರಿ ವಿಶ್ವವಿದ್ಯಾಲಯಕ್ಕೆ ಸರ್ಕಾರ ಆಯವ್ಯಯದಲ್ಲಿ ನಿಗದಿಪಡಿಸಿದ ಅನುದಾನ ಎಷ್ಟು ; ಮತ್ತು ಬಿಡುಗಡೆಯಾದ ಹಣವೆಷ್ಟು ; ಅದರಂತೆ ಇಲ್ಲಿಯವರೆಗೆ ಖರ್ಚುಮಾಡಿದ ಹಣವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಮಕ್ಕಳ ಸಂಖ್ಯೆ ಕಡಿಮೆ ಇರುವ ಶಾಲೆಗಳನ್ನು ವಿಲೀನಗೊಳಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೪೮೪ (೪೮೫೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ –

೨೦೧೩–೧೪ ರಿಂದ ೨೦೧೬–೧೭ರವರೆಗೂ ಮಕ್ಕಳ ಸಂಖ್ಯೆ ಕಡಿಮೆ ಇರುವ ಕಾರಣಕ್ಕಾಗಿ ಎಷ್ಟು ಪ್ರಾಥಮಿಕ ಶಾಲೆಗಳನ್ನು ವಿಲೀನಗೊಳಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಶೌಚಾಲಯಗಳ ನಿರ್ಮಾಣ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೮೫ (೪೮೪೮) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಯಲು ಶೌಚಾಲಯ ಮುಕ್ತ ಗ್ರಾಮಗಳೆಂದು ವಿಜಯಪುರ, ಬಾಗಲಕೋಟೆ ಜಿಲ್ಲೆಗಳಲ್ಲಿ ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಪ್ರತಿ ಗ್ರಾಮ ಪಂಚಾಯತಿಗೆ ಶೌಚಾಲಯಗಳ ನಿರ್ಮಾಣಕ್ಕೆ ಒಂದೇ ತರಹದ ಖರ್ಚು ಇರುವುದರಿಂದ ಬೇರೆ ಬೇರೆ ಪ್ರವರ್ಗಗಳಿಗೆ ಬೇರೆ ಬೇರೆ ಸಹಾಯ ಧನ ನಿಗದಿಗೊಳಿಸಿರುವುದು ಸರಿಯೇ ; ಸದರಿ ವರ್ಗಗಳಿಗೆ ಇರುವ ಮಾರ್ಗಸೂಚಿಯನ್ನು ತಿದ್ದುಪಡಿ ಮಾಡಿ ಎಲ್ಲಾ ವರ್ಗಗಳಿಗೂ ಸಮಾನ ರೀತಿಯಲ್ಲಿ ಸಹಾಯ ಧನ ಹಂಚಿಕೆ ಮಾಡುವ ವಿಚಾರ ಸರ್ಕಾರಕ್ಕೆ ಇದೆಯೇ; ಇದ್ದರೆ, ಯಾವ ಕಾಲಮಿತಿಯೊಳಗೆ ಜಾರಿಗೆ ತರಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಇ) ಹಾಲಿ ನಿಗಧಿಪಡಿಸಿರುವ ಸಹಾಯಧನವು ಶೌಚಾಲಯ ನಿರ್ಮಾಣ ಮಾಡುವ ವೆಚ್ಚಕ್ಕೆ ಸಾಕಾಗುವುದಿಲ್ಲ ; ಈ ಸಹಾಯಧನವನ್ನು ಹೆಚ್ಚಿಸುವ ವಿಚಾರ ಸರ್ಕಾರಕ್ಕೆ ಇದೆಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ಪ್ರತಿ ಗ್ರಾಮದ ಮನೆ ಮನೆಯ ಶೌಚಾಲಯಗಳಿಗೆ ಎಲ್ಲರಿಗೂ ಶೌಚಾಲಯ ನಿರ್ಮಾಣಕ್ಕೆ ನಿಗಧಿತ ಮೊತ್ತವನ್ನು ನೀಡಲು ಸರ್ಕಾರ ಮುಂದಾಗಿದೆಯೇ?

## ಬ್ಯಾಂಕ್ ಠೇವಣಿ ಬಗ್ಗೆ

**ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೪೮೬ (೪೮೬೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ಗ್ರಾಮೀಣಾಭಿವೃದ್ಧಿ ಮೂಲ ಸೌಕರ್ಯ ಅಭಿವೃದ್ಧಿ ನಿಗಮದಲ್ಲಿ ಠೇವಣಿ ಇಟ್ಟಿದ್ದ ಹಣವನ್ನು ಬೇರೆ ಬೇರೆ ಖಾತೆಗಳಿಗೆ ವರ್ಗಾವಣೆ ಮಾಡಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯಾವ್ಯಾವ ಬ್ಯಾಂಕ್‌ಗಳಲ್ಲಿ ಎಷ್ಟು ಮೊತ್ತವನ್ನು ಯಾವ ದಿನಾಂಕದಂದು ಠೇವಣಿ ಇಡಲಾಗಿತ್ತು ; ಈ ಹಣವನ್ನು ಯಾವ ಖಾತೆಗೆ ವರ್ಗಾವಣೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಈ ರೀತಿ ಹಣ ಠೇವಣಿ ಇಡಲು ಮತ್ತು ಹಣವನ್ನು ವರ್ಗಾವಣೆ ಮಾಡಲು ಅನುಮತಿ ನೀಡಿದವರು ಯಾರು ; ಇವರ ವಿರುದ್ಧ ಕೈಗೊಂಡಿರುವ ಶಿಸ್ತು ಕ್ರಮಗಳೇನು ? (ಮಾಹಿತಿ ನೀಡುವುದು)

## ಗ್ರಾಮ ಸ್ವರಾಜ್ ೨ನೇ ಹಂತದ ಯೋಜನೆ ಅನುಷ್ಠಾನ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೮೭ (೪೮೧೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗ್ರಾಮ ಸ್ವರಾಜ್ ೨ನೇ ಹಂತದ ಯೋಜನೆ ಅನುಷ್ಠಾನ ಯಾವ ಹಂತದಲ್ಲಿದೆ;

(ಆ) ಈ ಯೋಜನೆಯನ್ನು ತ್ವರಿತವಾಗಿ ಪ್ರಾರಂಭಿಸಲು ಇರುವ ತೊಡಕುಗಳೇನು;

(ಇ) ಯೋಜನೆಯನ್ನು ಅನುಷ್ಠಾನಗೊಳಿಸಲು ವಿಶ್ವಬ್ಯಾಂಕ್‌ನಿಂದ ಆರ್ಥಿಕ ನೆರವಿನ ಬಗ್ಗೆ ಸಹಮತಿ ದೊರೆತಿದೆಯೇ ;

(ಈ) ಸಹಮತಿ ದೊರೆತಲ್ಲಿ, ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು?

## ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿನ ಖಾಲಿ ಹುದ್ದೆ ತುಂಬಲು ಅನುಮತಿ ನೀಡುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) –**

೪೮೮ (೪೭೭೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಖಾಸಗಿ ಅನುದಾನಿತ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ಮರಣ ಇತ್ಯಾದಿ ಕಾರಣಗಳಿಂದ ಖಾಲಿ ಇರುವ ಬೋಧಕ ಹಾಗೂ ಬೋಧಕೇತರ ಹುದ್ದೆಗಳೆಷ್ಟು ; (ಹೆಸರು, ವಿಳಾಸ ಸಹಿತ ವಿವರ ನೀಡುವುದು)

(ಆ) ಸದರಿ ಹುದ್ದೆಗಳು ಖಾಲಿ ಇರುವುದರಿಂದ ಸದರಿ ಶಾಲೆಗಳಲ್ಲಿ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ೨೦೧೭ರ ಆಗಸ್ಟ್ ತಿಂಗಳಿನವರೆಗೆ ಖಾಲಿ ಆಗಿರುವ ಹುದ್ದೆಗಳನ್ನು ತುಂಬಲು ಅನುಮತಿ ನೀಡಲಾಗುವುದು ಯಾವಾಗ ? (ವಿವರ ನೀಡುವುದು)

## ಮಂಡ್ಯ ಜಿಲ್ಲೆಯಲ್ಲಿನ ಗಣಿಗಾರಿಕೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೮೯ (೪೮೨೫) ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ಜಿಲ್ಲೆಗೆ ಒಳಪಡುವ ತಾಲ್ಲೂಕುಗಳಲ್ಲಿ ಎಷ್ಟು ವಿಧವಾದ ಗಣಿಗಾರಿಕೆಗಳಿವೆ ;

(ಆ) ಸದರಿ ತಾಲ್ಲೂಕುಗಳಲ್ಲಿ ಚಾಲ್ತಿಯಲ್ಲಿರುವ ಗಣಿಗಾರಿಕೆಗಳ ಸಂಖ್ಯೆ ಎಷ್ಟು; ಗಣಿಗಾರಿಕೆ ಕಂಪನಿಗಳ ಹೆಸರು, ಮಾಲೀಕರ ಹೆಸರು, ವಿಳಾಸದೊಂದಿಗೆ ವಿವರ ನೀಡುವುದು ;

(ಇ) ಇಲ್ಲಿ ಅನಧಿಕೃತವಾಗಿ ಅಕ್ರಮವಾಗಿ ನಡೆಯುತ್ತಿರುವ ಗಣಿಗಾರಿಕೆಗಳು ಎಷ್ಟು ; (ವಿವರ ನೀಡುವುದು)

(ಈ) ಅನಧಿಕೃತವಾಗಿ ನಡೆಯುತ್ತಿರುವ ಗಣಿಗಾರಿಕೆಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಕ್ಯಾಬ್‌ಗಳ ಪರವಾನಗಿ ನೀಡುವ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೪೯೦ (೪೭೮೧) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಿಂದ ಬೆಂಗಳೂರು ನಗರದಲ್ಲಿ ಒಟ್ಟು ಚಾಲ್ತಿಯಲ್ಲಿರುವ ಆಟೋ ಕ್ಯಾಬ್‌ಗಳಿಗೆ ನೀಡಿರುವ ಪರವಾನಗಿ ಎಷ್ಟು ; ಅದರಲ್ಲಿ ನವೀಕರಿಸದೇ ಇರುವ ಸಂಖ್ಯೆ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ, ಬೆಂಗಳೂರು ನಗರ ಪ್ರದೇಶದಲ್ಲಿ ನೀಡಲಾಗಿರುವ ವರ್ಗಾವಣೆ ರಹಿತ (Non-Transferable) ಪರವಾನಗಿಗಳ ಸಂಖ್ಯೆ ಎಷ್ಟು; (ವರ್ಷವಾರು ವಿವರ ನೀಡುವುದು)

(ಇ) ವರ್ಗಾವಣೆ ರಹಿತ (Non-Transferable) ಪರವಾನಗಿಯನ್ನು ನೀಡುವುದಕ್ಕೆ ಕಾನೂನಿನ ಅಡಿಯಲ್ಲಿ ಅವಕಾಶವಿದೆಯೇ ; (ವಿವರಗಳನ್ನು ನೀಡುವುದು)

(ಈ) ಕಳೆದ ೩ ವರ್ಷಗಳಿಂದ ಇಲ್ಲಿಯವರೆವಿಗೂ ಬೆಂಗಳೂರು ನಗರದಲ್ಲಿ ನೀಡಿರುವ ಪ್ಯಾಸೆಂಜರ್ ಆಟೋ ಕ್ಯಾಬ್‌ಗಳ ಪರವಾನಗಿಗಳನ್ನು ಬದಲಿಸಿರುವ/ವರ್ಗಾಯಿಸಿರುವ ಸಂಖ್ಯೆ ಎಷ್ಟು ; (ವರ್ಷವಾರು ವಿವರ ನೀಡುವುದು)

(ಉ) ಬೆಂಗಳೂರು ನಗರದಲ್ಲಿ ಎಲ್ಲಾ ರೀತಿಯ ಬಿ.ಎಂ.ಟಿ.ಸಿ. ಒಳಗೊಂಡಂತೆ, ಸಾರ್ವಜನಿಕ ಹಾಗೂ ಖಾಸಗಿ ಡೀಸಲ್ ವಾಹನಗಳ ಒಟ್ಟು ಸಂಖ್ಯೆ ಎಷ್ಟು ? (ಪ್ರತ್ಯೇಕವಾದ ಮಾಹಿತಿಯನ್ನು ನೀಡುವುದು)

## ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆಯಡಿ ನೇಮಕಗೊಂಡ ಸಿಬ್ಬಂದಿಯನ್ನು ಮುಂದುವರಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೪೯೧ (೪೯೧೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆಯಡಿ ಬ್ಲಾಕ್ ಹಾಗೂ ಕ್ಲಸ್ಟರ್ ಸಂಯೋಜಕರನ್ನು (B.R.C./C.R.C.) ಯಾವ ದಿನಾಂಕದಂದು ನೇಮಕ ಮಾಡಿಕೊಳ್ಳಲಾಗಿದೆ ;

(ಆ) ಈ ಯೋಜನೆಯಡಿ ಕಾರ್ಯನಿರ್ವಹಿಸುತ್ತಿದ್ದ ಬ್ಲಾಕ್ ಹಾಗೂ ಕ್ಲಸ್ಟರ್ ಸಂಯೋಜಕರನ್ನು ಯೋಜನೆ ಮುಗಿಯುವವರೆಗೆ ಮುಂದುವರೆಸಲು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ಯಾವಾಗ ಆದೇಶ ನೀಡಿದೆ ;

(ಇ) ಈ ಆದೇಶವನ್ನು ಅನುಷ್ಠಾನಗೊಳಿಸಲು ಕಡತವನ್ನು ಯಾವ ದಿನಾಂಕದಂದು ಆರಂಭಿಸಲಾಯಿತು ;

(ಈ) ಬ್ಲಾಕ್ ಹಾಗೂ ಕ್ಲಸ್ಟರ್ ಸಂಯೋಜಕರನ್ನು ಮುಂದುವರಿಸಲು ಸಚಿವರು ಎಷ್ಟು ಸಲ ಆದೇಶ ಮಾಡಿದ್ದಾರೆ ; ದಿನಾಂಕಗಳನ್ನು ತಿಳಿಸುವುದು ;

(ಉ) ಸಚಿವರ ಆದೇಶವನ್ನು ಅಧಿಕಾರಿಗಳು ಅನುಷ್ಠಾನಗೊಳಿಸದಿರಲು ಕಾರಣಗಳೇನು ;

(ಊ) ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶ ಅನುಷ್ಠಾನಗೊಳಿಸಲು ಸಾಧ್ಯವಿಲ್ಲದ್ದಿದ್ದರೆ ಅದನ್ನು ತಿರಸ್ಕರಿಸಿ ಹಿಂಬರಹ ನೀಡಲು ಇರುವ ತೊಂದರೆಗಳೇನು ;

(ಖ) ಈ ಪ್ರಕರಣದಲ್ಲಿ ಸರ್ಕಾರವು ನ್ಯಾಯಾಂಗ ನಿಂದನೆ ಎದುರಿಸುವ ಸಾಧ್ಯತೆಗಳಿದ್ದು, ಸಚಿವರ ಆದೇಶ ಧಿಕ್ಕರಿಸಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳ ಭರ್ತಿ ನಿಯಮ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೯೨ (೪೯೦೧) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಸಂದರ್ಭದಲ್ಲಿ ವಿಷಯ ಶಿಕ್ಷಕವಾರು ಮೀಸಲಾತಿ ಅನುಸರಿಸುತ್ತಿದೆಯೇ ; ಈ ಕ್ರಮ ಸರಿಯೇ ; ಇದರಿಂದ ಉಂಟಾಗಿರುವ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಆ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸುವ ಸಮಯದಲ್ಲಿ ಇಡೀ ಶಿಕ್ಷಣ ಸಂಸ್ಥೆಯನ್ನು ಒಂದು ಘಟಕವನ್ನಾಗಿ ನೂರು ಬಿಂದುಗಳ ರೋಸ್ಟರ್ ಅಳವಡಿಸಲಾಗುತ್ತಿದೆ, ಇಲ್ಲಿ ಆ ನಿಯಮಾವಳಿ ಅಳವಡಿಸುವ ಕುರಿತು ಕ್ರಮ ಕೈಗೊಳ್ಳಲಾಗುವುದೇ?

## ರಿಯಾಯಿತಿ ಬಸ್ ಪಾಸ್‌ಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೯೩ (೪೮೪೩) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ವಿವಿಧ ವರ್ಗದ, ವಿವಿಧ ಶ್ರೇಣಿಯ ಜನರು ಹೊಂದಿರುವ ರಿಯಾಯಿತಿ ಬಸ್ ಪಾಸ್‌ಗಳ ಸಂಖ್ಯೆ ಎಷ್ಟು ; ಅದರಿಂದ ಸರ್ಕಾರಕ್ಕಾಗುವ ನಷ್ಟವೆಷ್ಟು ; ನಷ್ಟವನ್ನು ಭರಿಸಲು ಸರ್ಕಾರದ ಕಾರ್ಯಕ್ರಮವೇನು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಕ.ರಾ.ರ.ಸಾ. ಸಂಸ್ಥೆಯಿಂದ ವಿತರಿಸಲಾದ ಬಸ್ ಪಾಸ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ಬಸ್ ಪಾಸ್‌ಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುವಂತೆ ಬಸ್‌ಗಳ ಪರವಾನಿಗೆಯನ್ನು ತಡೆಯಲು ಕಾರಣವೇನು ;

(ಇ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವಿರುದ್ಧ ಖಾಸಗಿ ಬಸ್ ಸಂಸ್ಥೆಯವರು ನ್ಯಾಯಾಲಯದಲ್ಲಿ ದಾಖಲಿಸಿದ ಪ್ರಕರಣಗಳ ಸಂಖ್ಯೆ ಎಷ್ಟು ; ಅವು ಯಾವುವು ? (ಪ್ರಕರಣವಾರು ಮಾಹಿತಿ ನೀಡುವುದು)

## ವಾಹನಗಳಿಗೆ ಸ್ಪೀಡ್ ಗವರ್ನರ್ ಅಳವಡಿಸುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೯೪ (೪೯೧೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೊಸ ಮತ್ತು ಹಳೆಯ ವಾಣಿಜ್ಯ ವಾಹನಗಳಿಗೆ ಸ್ಪೀಡ್ ಗವರ್ನರ್‌ಗಳನ್ನು ಅಳವಡಿಸುವ ಕುರಿತಂತೆ ಮೋಟಾರು ವಾಹನ ನಿಯಮದಲ್ಲಿ ಏನು ಉಲ್ಲೇಖ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ಸ್ಪೀಡ್ ಗವರ್ನರ್ ಅಳವಡಿಕೆ ಕಡ್ಡಾಯಕ್ಕೆ ಕಾರಣಗಳೇನು ;

(ಇ) ಸ್ಪೀಡ್ ಗವರ್ನರ್ ಅಳವಡಿಕೆಗೆ ರಾಜ್ಯ ಸರ್ಕಾರ ನಿಗಧಿಪಡಿಸಿರುವ ವೆಚ್ಚವೆಷ್ಟು; ನಿಬಂಧನೆಗಳೇನು ; ಇಂತಹುದೇ ಕಂಪನಿಯ ಉಪಕರಣ ಅಳವಡಿಸಬೇಕೆಂಬ ನಿಯಮವಿದೆಯೇ ; ಅದಕ್ಕೆ ಕಾರಣಗಳೇನು ;

(ಈ) ಈಗ ಸರ್ಕಾರ ಅನುಮತಿಸಿರುವ ಕಂಪನಿಯ ಉಪಕರಣಕ್ಕೂ ತಮಿಳುನಾಡು ರಾಜ್ಯದಲ್ಲಿ ಅನುಮತಿಸಿರುವ ಉಪಕರಣಕ್ಕೂ ಬೆಲೆಯಲ್ಲಿ ಸಾಕಷ್ಟು ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೪೯೫ (೪೮೬೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಪ್ರಾರಂಭಿಸಲಾಗಿದೆ ;

(ಆ) ಪ್ರಸ್ತುತ ವರ್ಷದ ಆಯವ್ಯಯದಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಪ್ರಾರಂಭಿಸಲು ಅನುದಾನವನ್ನು ಮೀಸಲಿಡಲಾಗಿದೆ ; (ವಿವರ ಒದಗಿಸುವುದು)

(ಇ) ಚಿಕ್ಕಮಗಳೂರು ಜಿಲ್ಲೆ, ಮೂಡಿಗೆರೆ ತಾಲ್ಲೂಕಿನಲ್ಲಿ ಪ್ರಸ್ತುತ ವರ್ಷದಲ್ಲಿ ಯಾವ ಯಾವ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಆಯ್ಕೆ ಮಾಡಲಾಗಿದೆ ? (ವಿವರ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸುವರ್ಣ ಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500